Email Kolardccb@yahoo.com
**ದೂರವಾಣಿ : 222 042**

# ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಕೋಲಾರ

**(ಅಂಚೆಪೆಟ್ಟಿಗೆ ಸಂಖ್ಯೆ 11, ಡಿ.ಸಿ.ಸಿ ಬ್ಯಾಂಕ್ ರಸ್ತೆ, ಕೋಲಾರ-563101)**

==================================================================

ಸಂಖ್ಯೆ: ಆ ಮತ್ತು ಸಿ/12579/2017–18 ದಿನಾಂಕ: 08.01.2018

## ನೇಮಕಾತಿ ಪ್ರಕಟಣೆ

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಹಾಗೂ ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳು 1960, ಬ್ಯಾಂಕಿನ ಉಪವಿಧಿ ಮತ್ತು ಸಿಬ್ಬಂದಿ ಸೇವಾ ನಿಯಮಗಳಲ್ಲಿನ ಅವಕಾಶಗಳಿಗೊಳಪಟ್ಟು **ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನಲ್ಲಿಖಾಲಿ** ಇರುವ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ONLINE (ಅಂತರ್ಜಾಲದ ತಾಕ್ಷಣಿಕ ಸೇವೆಯ) ಮುಖಾಂತರಆಹ್ವಾನಿಸಲಾಗಿದೆ. **ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಕಳುಹಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ.** ನೇಮಕಾತಿ ಮಾಡಲು ಉದ್ದೇಶಿಸಿರುವ ವಿವಿಧ ವೃಂದಗಳ ಒಟ್ಟು 55 ಹುದ್ದೆಗಳನ್ನು ಈ ಕೆಳಗಿನಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ. **ಕರ್ನಾಟಕ ಸರ್ಕಾರ ಸಹಕಾರ ಇಲಾಖೆಯ ಮಾನ್ಯ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ರವರ ಆದೇಶ ಸಂಖ್ಯೆ: ಸಿಒ : 185 : ಸಿಸಿಬಿ : 2017, ಬೆಂಗಳೂರು ದಿನಾಂಕ : 04.01.2018 ರನ್ವಯ ನೇರ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ಪಡೆಯಲಾಗಿದೆ.**

## 1. ಹುದ್ದೆಗಳ ವಿವರ :

**(1) ಹುದ್ದೆ: ವ್ಯವಸ್ಥಾಪಕರು : ಒಟ್ಟು ಹುದ್ದೆಗಳ ಸಂಖ್ಯೆ: 03**
**ವೇತನ ಶ್ರೇಣಿ: ರೂ 20000–500–21000–600–24600–700–28800–800–33600–900–36300ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 2 | - | 1 | 1 | - | - | - | - |
| ಪರಿಶಿಷ್ಠ ಜಾತಿ | - | - | - | - | - | - | - | - |
| ಪರಿಶಿಷ್ಠ ಪಂಗಡ | - | - | - | - | - | - | - | - |
| ಪ್ರವರ್ಗ–1 | - | - | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - |
| ಪ್ರವರ್ಗ II (ಬಿ) | 1 | 1 | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - |
| ಒಟ್ಟು | 3 | 1 | 1 | 1 | - | - | - | - |

**(2) ಹುದ್ದೆ: ಲೆಕ್ಕಿಗರು : ಒಟ್ಟು ಹುದ್ದೆಗಳ ಸಂಖ್ಯೆ: 03**
**ವೇತನ ಶ್ರೇಣಿ: ರೂ 19000–500–21000–600–24600–700–28800–800–33600–900–34500ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 1 | 1 | - | - | - | - | - | - |
| ಪರಿಶಿಷ್ಟ ಜಾತಿ | 1 | 1 | - | - | - | - | - | - |
| ಪರಿಶಿಷ್ಟ ಪಂಗಡ | 1 | 1 | - | - | - | - | - | - |
| ಪ್ರವರ್ಗ–1 | - | - | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - |
| ಒಟ್ಟು | 3 | 3 | | | - | - | - | - |

**(3)ಹುದ್ದೆ: ಹಿರಿಯ ಸಹಾಯಕರು : ಒಟ್ಟು ಹುದ್ದೆಗಳ ಸಂಖ್ಯೆ: 15**
**ವೇತನ ಶ್ರೇಣಿ: ರೂ 17650–450–19000–500–21000–600–24600–700–28800–800–32000ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 7 | 1 | 2 | 2 | - | 1 | 1 | - |
| ಪರಿಶಿಷ್ಟ ಜಾತಿ | 2 | - | 1 | - | 1 | - | - | - |
| ಪರಿಶಿಷ್ಟ ಪಂಗಡ | 0 | - | - | - | - | - | - | - |
| ಪ್ರವರ್ಗ–1 | 1 | - | 1 | - | - | - | - | - |
| ಪ್ರವರ್ಗ II (ಎ) | 3 | - | 1 | 1 | 1 | - | - | - |
| ಪ್ರವರ್ಗ II (ಬಿ) | 0 | - | - | - | - | - | - | - |
| ಪ್ರವರ್ಗ III (ಎ) | 1 | 1 | - | - | - | - | - | - |
| ಪ್ರವರ್ಗ III(ಬಿ) | 1 | 1 | - | - | - | - | - | - |
| ಒಟ್ಟು | 15 | 3 | 5 | 3 | 2 | 1 | 1 | - |

**(4)ಹುದ್ದೆ: ಶೀಘ್ರಲಿಪಿಗಾರರು : ಒಟ್ಟು ಹುದ್ದೆಗಳ ಸಂಖ್ಯೆ: 02**
**ವೇತನ ಶ್ರೇಣಿ: ರೂ 17650–450–19000–500–21000–600–24600–700–28800–800–32000ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 1 | 1 | - | - | - | - | - | - |
| ಪರಿಶಿಷ್ಟ ಜಾತಿ | 1 | 1 | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - | - |
| ಪ್ರವರ್ಗ–1 | - | - | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - |

| ಒಟ್ಟು | 2 | 2 | - | - | - | - | - | - |
|---|---|---|---|---|---|---|---|---|

**(5)ಹುದ್ದೆ: ಕಿರಿಯ ಸಹಾಯಕರು : ಒಟ್ಟು ಹುದ್ದೆಗಳ ಸಂಖ್ಯೆ: 27**

**ವೇತನ ಶ್ರೇಣಿ: ರೂ 16000–400–17200–450–19000–500–21000–600–24600–700–28800–800–29600ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 14 | 2 | 5 | 3 | 1 | 1 | 1 | 1 |
| ಪರಿಶಿಷ್ಟ ಜಾತಿ | 4 | 1 | 2 | 1 | - | - | - | - |
| ಪರಿಶಿಷ್ಟ ಪಂಗಡ | 1 | - | 1 | - | - | - | - | - |
| ಪ್ರವರ್ಗ–1 | 1 | - | 1 | - | - | - | - | - |
| ಪ್ರವರ್ಗ II (ಎ) | 4 | 1 | 1 | 1 | 1 | - | - | - |
| ಪ್ರವರ್ಗ II (ಬಿ) | 1 | - | 1 | - | - | - | - | - |
| ಪ್ರವರ್ಗ III (ಎ) | 1 | - | 1 | - | - | - | - | - |
| ಪ್ರವರ್ಗ III(ಬಿ) | 1 | - | 1 | - | - | - | - | - |
| ಒಟ್ಟು | 27 | 4 | 13 | 5 | 2 | 1 | 1 | 1 |

**(6)ಹುದ್ದೆ: ವಾಹನ ಚಾಲಕರು : ಒಟ್ಟು ಹುದ್ದೆಗಳ ಸಂಖ್ಯೆ: 02**

**ವೇತನ ಶ್ರೇಣಿ: ರೂ 14550–350–15600–400–17200–450–19000–500–21000–600–24600–700–26700ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 1 | - | - | 1 | - | - | - | - |
| ಪರಿಶಿಷ್ಟ ಜಾತಿ | - | - | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - | - |
| ಪ್ರವರ್ಗ–1 | 1 | 1 | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - |
| ಪ್ರವರ್ಗ II (ಬಿ) | - | - | - | - | - | - | - | - |
| ಪ್ರವರ್ಗ III (ಎ) | - | - | - | - | - | - | - | - |
| ಪ್ರವರ್ಗ III(ಬಿ) | - | - | - | - | - | - | - | - |
| ಒಟ್ಟು | 2 | 1 | - | 1 | - | - | - | - |

**(7)ಹುದ್ದೆ: ಜವಾನರು : ಒಟ್ಟು ಹುದ್ದೆಗಳ ಸಂಖ್ಯೆ: 03**

**ವೇತನ ಶ್ರೇಣಿ: ರೂ 12500–250–13000–300–14200–350–15600–400–17200–450–19000–500–21000–600–24000ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾಗುವ ಇತರೆ ಭತ್ಯೆಗಳು**

| ವರ್ಗ | ಒಟ್ಟು ಹುದ್ದೆಗಳು | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ |
|---|---|---|---|---|---|---|---|---|
| ಸಾಮಾನ್ಯ | 1 | - | - | 1 | - | - | - | - |
| ಪರಿಶಿಷ್ಟ ಜಾತಿ | - | - | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - | - |
| ಪ್ರವರ್ಗ–1 | - | - | - | - | - | - | - | - |
| ಪ್ರವರ್ಗ II (ಎ) | - | - | - | - | - | - | - | - |

| | | | | | | | | |
|---|---|---|---|---|---|---|---|---|
| ಪ್ರವರ್ಗ II (ಬಿ) | - | - | - | - | - | - | - | - |
| ಪ್ರವರ್ಗ III (ಎ) | 1 | 1 | - | - | - | - | - | - |
| ಪ್ರವರ್ಗ III(ಬಿ) | 1 | 1 | - | - | - | - | - | - |
| ಒಟ್ಟು | 3 | 2 | - | 1 | - | - | - | - |

## 2. ಶೈಕ್ಷಣಿಕ ವಿದ್ಯಾರ್ಹತೆ :

**ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.**

ಹುದ್ದೆ 1 ವ್ಯವಸ್ಥಾಪಕರು : ಅಂಗೀಕೃತ ವಿಶ್ವ ವಿದ್ಯಾನಿಲಯದ " ಎಂ.ಬಿ.ಎ (dual specialization in ಬ್ಯಾಂಕಿಂಗ್ ಮತ್ತು ಫೈನ್ಯಾನ್ಸ್) ಅಥವಾ ಎಂ.ಬಿ.ಎ (specialization in ಬ್ಯಾಂಕಿಂಗ್ ಮತ್ತು ಫೈನ್ಯಾನ್ಸ್ ಹಾಗೂ ಹ್ಯೂಮನ್ ರಿಸೋರ್ಸ್ ಮ್ಯಾನೇಜ್‌ಮೆಂಟ್) ಅಥವಾ ಎಂ.ಬಿ.ಎ (specialization in ಬ್ಯಾಂಕಿಂಗ್ ಮತ್ತು ಹ್ಯೂಮನ್ ರಿಸೋರ್ಸ್ ಮ್ಯಾನೇಜ್‌ಮೆಂಟ್) ಅಥವಾ ಎಂಎಸ್‌ಸಿ (ಗಣಿತ) ಅಥವಾ ಎಂ.ಎಸ್.ಡಬ್ಲ್ಯು ಸ್ನಾತಕೋತ್ತರ ಪದವೀಧರರಾಗಿದ್ದು ಅಥವಾ ಯಾವುದೇ ಅಂಗೀಕೃತ ವಿಶ್ವ ವಿದ್ಯಾನಿಲಯದ ಬಿ.ಕಾಂ ಪದವೀಧರರಾಗಿದ್ದು ಕನಿಷ್ಠ ಶೇಕಡ 60 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಪ್ರವರ್ಗ–1 ಅಭ್ಯರ್ಥಿಗಳಾಗಿದ್ದಲ್ಲಿ ಶೇಕಡ 55 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಕನ್ನಡ ಭಾಷೆ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು. ಕಂಪ್ಯೂಟರ್ M.S. Office ಮತ್ತು ಟ್ಯಾಲಿ ಜ್ಞಾನ ಹೊಂದಿರತಕ್ಕದ್ದು.

**ಮೇಲೆ ನಮೂದಿಸಿರುವ ಸ್ನಾತಕೋತ್ತರ ಪದವಿ / ಪದವಿ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸ್ನಾತಕೋತ್ತರ ಪದವಿ / ತಾಂತ್ರಿಕ ಪದವಿ / ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ನಿಗಧಿಪಡಿಸಿದ ಶೇಕಡಾವಾರು ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಗಳಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ತೆರಪಿನ ಹಾಗೂ ದೂರ ಶಿಕ್ಷಣ ಯೋಜನೆಯಡಿ ಸ್ನಾತಕೋತ್ತರ ಪದವಿ ಅಥವಾ ಪದವಿಯನ್ನು ಪಡೆದಿರುವ ಪದವೀಧರರು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.**

ಹುದ್ದೆ 2 ಲೆಕ್ಕಿಗರು: ಅಂಗೀಕೃತ ವಿಶ್ವ ವಿದ್ಯಾನಿಲಯದ " ಎಂ.ಬಿ.ಎ (dual specialization in ಬ್ಯಾಂಕಿಂಗ್ ಮತ್ತು ಫೈನ್ಯಾನ್ಸ್) ಅಥವಾ ಎಂ.ಬಿ.ಎ (specialization in ಬ್ಯಾಂಕಿಂಗ್ ಮತ್ತು ಫೈನ್ಯಾನ್ಸ್ ಹಾಗೂ ಹ್ಯೂಮನ್ ರಿಸೋರ್ಸ್ ಮ್ಯಾನೇಜ್‌ಮೆಂಟ್) ಅಥವಾ ಎಂಎಸ್‌ಸಿ (ಗಣಿತ) ಅಥವಾ ಎಂ.ಕಾಂ ಸ್ನಾತಕೋತ್ತರ ಪದವೀಧರರಾಗಿದ್ದು ಅಥವಾ ಅಥವಾ ಯಾವುದೇ ಅಂಗೀಕೃತ ವಿಶ್ವ ವಿದ್ಯಾನಿಲಯದ ಬಿ.ಕಾಂ ಪದವೀಧರರಾಗಿದ್ದು ಕನಿಷ್ಠ ಶೇಕಡ 60 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಪ್ರವರ್ಗ–1 ಅಭ್ಯರ್ಥಿಗಳಾಗಿದ್ದಲ್ಲಿ ಶೇಕಡ 55 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಕನ್ನಡ ಭಾಷೆ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು. ಕಂಪ್ಯೂಟರ್ M.S. Office ಮತ್ತು ಟ್ಯಾಲಿ ಜ್ಞಾನ ಹೊಂದಿರತಕ್ಕದ್ದು.

**ಮೇಲೆ ನಮೂದಿಸಿರುವ ಸ್ನಾತಕೋತ್ತರ ಪದವಿಗಳನ್ನು / ಪದವಿ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸ್ನಾತಕೋತ್ತರ ಪದವಿ / ತಾಂತ್ರಿಕ ಪದವಿ / ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ನಿಗಧಿಪಡಿಸಿದ ಶೇಕಡಾವಾರು ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಗಳಿಸಿದ್ದಲ್ಲಿ ಅಂತಹ ಅರ್ಜಿಗಳನ್ನು**

**ತಿರಸ್ಕರಿಸಲಾಗುವುದು. ಅಂಚೆ ತೆರಪಿನ ಹಾಗೂ ದೂರ ಶಿಕ್ಷಣ ಯೋಜನೆಯಡಿ ಸ್ನಾತಕೋತ್ತರ ಪದವಿ ಅಥವಾ ಪದವಿಯನ್ನು ಪಡೆದಿರುವ ಪದವೀಧರರು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.**

ಹುದ್ದೆ 3 ಹಿರಿಯ ಸಹಾಯಕರು: ಭಾರತದ ಕಾನೂನಿನಡಿ ಸ್ಥಾಪನೆಯಾದ ಯಾವುದೇ ವಿಶ್ವವಿದ್ಯಾನಿಲಯದ " ಬಿ.ಎಸ್.ಸಿ (ಗಣಿತ ಒಂದು ವಿಷಯವಾಗಿರತಕ್ಕದ್ದು) ಅಥವಾ ಬಿ.ಕಾಂ ಅಥವಾ ಬಿ.ಬಿ.ಎಮ್ ಅಥವಾ ಬಿ.ಬಿ.ಎ ಅಥವಾ ಬಿ.ಸಿ.ಎ" ಪದವೀಧರರಾಗಿದ್ದು ಕನಿಷ್ಠ ಶೇಕಡ 60 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಪ್ರವರ್ಗ–1 ಅಭ್ಯರ್ಥಿಗಳಾಗಿದ್ದಲ್ಲಿ ಶೇಕಡ 55 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಕನ್ನಡ ಭಾಷೆ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು. ಕಂಪ್ಯೂಟರ್ M.S. Office ಮತ್ತು ಟ್ಯಾಲಿ ಜ್ಞಾನ ಹೊಂದಿರತಕ್ಕದ್ದು.

**ಮೇಲೆ ನಮೂದಿಸಿರುವ ಪದವಿಗಳನ್ನು / ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಪದವಿ / ತಾಂತ್ರಿಕ ಪದವಿ / ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ನಿಗಧಿಪಡಿಸಿದ ಶೇಕಡಾವಾರು ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಗಳಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ತೆರಪಿನ ಹಾಗೂ ದೂರ ಶಿಕ್ಷಣ ಯೋಜನೆಯಡಿ ಪದವಿಯನ್ನು ಪಡೆದಿರುವ ಪದವೀಧರರು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.**

ಹುದ್ದೆ 4 ಶೀಘ್ರಲಿಪಿಗಾರರು: ದ್ವಿತೀಯ ಪಿಯುಸಿಯಲ್ಲಿ ಅಥವಾ ಮೂರು ವರ್ಷದ ಡಿಪ್ಲಮೋ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ನಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಇಂಗ್ಲೀಷ್ ಮತ್ತು ಕನ್ನಡ ಎರಡು ಭಾಷೆಗಳಲ್ಲೂ ಪ್ರೌಢ ದರ್ಜೆ ಬೆರಳಚ್ಚು ಪರೀಕ್ಷೆ ಮತ್ತು ಪ್ರೌಢ ದರ್ಜೆ ಶೀಘ್ರಲಿಪಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು (ಪ್ರವೀಣ ದರ್ಜೆ ಹೊಂದಿದವರಿಗೆ ಆದ್ಯತೆ ನೀಡಲಾಗುವುದು) ಹಾಗೂಕಂಪ್ಯೂಟರ್ M.S. Office ಜ್ಞಾನ ಹೊಂದಿರತಕ್ಕದ್ದು. ಕನ್ನಡ ಭಾಷೆ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು.

**ಮೇಲೆ ನಮೂದಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ ತತ್ಸಮಾನವಾದ ಯಾವುವೇ ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ**

ಹುದ್ದೆ 5 ಕಿರಿಯ ಸಹಾಯಕರು: ಪದವಿ ಪೂರ್ವ ಶಿಕ್ಷಣ ಇಲಾಖೆಯು ನಡೆಸುವ ಅಂಗೀಕೃತ ವಿದ್ಯಾ ಸಂಸ್ಥೆಗಳಿಂದ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 60 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಪ್ರವರ್ಗ–1 ಅಭ್ಯರ್ಥಿಗಳಾಗಿದ್ದಲ್ಲಿ ಶೇಕಡ 55 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಕನ್ನಡ ಭಾಷೆ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು. ಕಂಪ್ಯೂಟರ್ M.S. Officeಮತ್ತು ಟ್ಯಾಲಿ ಜ್ಞಾನ ಹೊಂದಿರತಕ್ಕದ್ದು.

**ಮೇಲೆ ನಮೂದಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ ಪದವಿ ಪೂರ್ವ ಶಿಕ್ಷಣಕ್ಕೆ (ದ್ವಿತೀಯಪಿ.ಯು.ಸಿ)ತತ್ಸಮಾನವಾದ ಯಾವುವೇ ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ನಿಗಧಿಪಡಿಸಿದ ಶೇಕಡಾವಾರು ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಗಳಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ತೆರಪಿನ ಹಾಗೂ ದೂರ ಶಿಕ್ಷಣ ಯೋಜನೆಯಡಿ ಪದವಿಪೂರ್ವ ಶಿಕ್ಷಣ ಪಡೆದಿರುವವರು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.**

**ಹುದ್ದೆ 6 ವಾಹನ ಚಾಲಕರು:** ಕನ್ನಡವನ್ನು ಒಂದು ಭಾಷೆಯ ವಿಷಯವಾಗಿ ತೆಗೆದುಕೊಂಡು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆ ಆಗಿರಬೇಕು. ಕನ್ನಡ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು. ಮತ್ತು ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ನೀಡುವ ಲಘು ವಾಹನ ಚಾಲನಾ ಪರವಾನಿಗೆ ಕಡ್ಡಾಯವಾಗಿ ಹೊಂದಿರತಕದ್ದು. ಲಘು ವಾಹನ ಚಾಲನೆಯಲ್ಲಿ ಕನಿಷ್ಠ 5 ವರ್ಷಗಳ ಅನುಭವ ಹೊಂದಿರತಕ್ಕದ್ದು.

**ಹುದ್ದೆ 7 ಜವಾನರು:** ಕನ್ನಡವನ್ನು ಒಂದು ಭಾಷೆಯ ವಿಷಯವಾಗಿ ತೆಗೆದುಕೊಂಡು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆ ಆಗಿರಬೇಕು. ಕನ್ನಡ ಮಾತನಾಡಲು, ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು.

**3. ವಯೋಮಿತಿ:** ಅರ್ಜಿಗಳನ್ನು ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗಧಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 | 35 |
| 2(ಎ), 2(ಬಿ), 3(ಎ), 3(ಬಿ) | 18 | 38 |
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ-1 | 18 | 40 |

ಈ ಕೆಳಗಿನ ಸಂಧರ್ಭಗಳಲ್ಲಿ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು

(ಎ) ಮಾಜಿ ಸೈನಿಕ ಅಭ್ಯರ್ಥಿಗೆ ಸರ್ಕಾರದ ಆದೇಶಾನುಸಾರ" ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು" ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(ಬಿ) ದೈಹಿಕ ಅಂಗವಿಕಲತೆ ಹೊಂದಿದ ಅಭ್ಯರ್ಥಿಗೆ ೧೦ (ಹತ್ತು) ವರ್ಷ

(ಸಿ) ವಿಧವೆ ಅಭ್ಯರ್ಥಿಗೆ ೧೦ (ಹತ್ತು) ವರ್ಷ

**4. ಅರ್ಜಿ ಶುಲ್ಕ :**

| ಕ್ರಮ ಸಂಖ್ಯೆ | ಹುದ್ದೆ | ಸಾಮಾನ್ಯ ಮತ್ತು ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರ.ವರ್ಗ-1, ಅಂಗವಿಕಲ, ಮಾಜಿ ಸೈನಿಕ ಹಾಗೂ ವಿಧವೆಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. |
|---|---|---|---|
| 1 | 1 ರಿಂದ5ರವರೆಗೆ | ರೂ. 1000/- | ರೂ. 750/- |
| 2 | 6ರಿಂದ7ರವರೆಗೆ | ರೂ. 800/- | ರೂ. 600/- |

**ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಈ ಕೆಳಕಂಡ ವಿಧಾನಗಳಲ್ಲಿ ಯಾವುದಾದರೊಂದನ್ನು ಆಯ್ಕೆ ಮಾಡಿಕೊಳ್ಳಬಹುದು.**

- ☞ **Payment using Net Banking, credit card, Debit card**
  **ಅಥವಾ**
- ☞ **Challan payment through Bank ಅನ್ನು ಡೌನ್ ಲೋಡ್ ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿ ನಿಮ್ಮ ಬ್ಯಾಂಕ್ ಖಾತೆ ಹೊಂದಿರುವ ಯಾವುದೇ ಶಾಖೆಗಳಲ್ಲಿ ಬ್ಯಾಂಕಿನ ವ್ಯವಹಾರದ ವೇಳೆಯಲ್ಲಿ ಹಣ ಸಂದಾಯ ಮಾಡಬಹುದಾಗಿರುತ್ತದೆ. ಸಂಬಂಧಿಸಿದ ಬ್ಯಾಂಕಿಗೆ ನಿಗಪಡಿಸಿದ ಅಂತಿಮ ದಿನಾಂಕದೊಳಗಾಗಿ ಪಾವತಿಸತಕ್ಕದ್ದು, ಇದನ್ನು ಹೊರತುಪಡಿಸಿ ಡಿಡಿ/ಪೋಸ್ಟಲ್ ಆರ್ಡರ್/ ಮನಿಯಾರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

## 5. ಆಯ್ಕೆ ವಿಧಾನ :

1.ವ್ಯವಸ್ಥಾಪಕರ ಹುದ್ದೆ: ಖಾಲಿ ಇರುವ ವ್ಯವಸ್ಥಾಪಕರ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

ವ್ಯವಸ್ಥಾಪಕರ ಹುದ್ದೆಗೆ ನಿಗಧಿಪಡಿಸಿದ ಅರ್ಹತಾ ವಿದ್ಯಾರ್ಹತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:20 ರ ಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಕರೆಯಾಗುವುದು. ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| **ಕನ್ನಡ ಭಾಷೆ** | **50 ಅಂಕಗಳು** |
| **ಸಾಮಾನ್ಯ ಆಂಗ್ಲ ಭಾಷೆ** | **25 ಅಂಕಗಳು** |
| **ಸಾಮಾನ್ಯ ಜ್ಞಾನ** | **25 ಅಂಕಗಳು** |
| **ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು** | **50 ಅಂಕಗಳು** |
| **ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು** | **25 ಅಂಕಗಳು** |
| **ಸಹಕಾರ ಮತ್ತು ಬ್ಯಾಂಕಿಂಗ್ ವ್ಯವಸ್ಥೆ** | **25 ಅಂಕಗಳು** |
| **ಒಟ್ಟು** | **200 ಅಂಕಗಳು** |

ಇವುಗಳ ಬಗ್ಗೆ ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಅವರಿಂದಲೇ ಮಾಡಿಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.** ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

2.ಲೆಕ್ಕಿಗರು ಹುದ್ದೆ: ಖಾಲಿ ಇರುವ ಲೆಕ್ಕಿಗರ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

ಲಕ್ಕಿಗರ ಹುದ್ದೆಗೆ ನಿಗಧಿಪಡಿಸಿದ ಅರ್ಹತಾ ವಿದ್ಯಾರ್ಹತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:20 ರ ಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಕರೆಯಾಗುವುದು. ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| **ಕನ್ನಡ ಭಾಷೆ** | **50 ಅಂಕಗಳು** |
| **ಸಾಮಾನ್ಯ ಆಂಗ್ಲ ಭಾಷೆ** | **25 ಅಂಕಗಳು** |
| **ಸಾಮಾನ್ಯ ಜ್ಞಾನ** | **25 ಅಂಕಗಳು** |
| **ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು** | **50 ಅಂಕಗಳು** |
| **ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು** | **25 ಅಂಕಗಳು** |
| **ಸಹಕಾರ ಮತ್ತು ಬ್ಯಾಂಕಿಂಗ್ ವ್ಯವಸ್ಥೆ** | **25 ಅಂಕಗಳು** |
| **ಒಟ್ಟು** | **200 ಅಂಕಗಳು** |

ಇವುಗಳ ಬಗ್ಗೆ ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಅವರಿಂದಲೇ ಮಾಡಿಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.** ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

3. ಹಿರಿಯ ಸಹಾಯಕರ ಹುದ್ದೆ: ಖಾಲಿ ಇರುವ ಹಿರಿಯ ಸಹಾಯಕರ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

ಹಿರಿಯ ಸಹಾಯಕರ ಹುದ್ದೆಗೆ ನಿಗಧಿಪಡಿಸಿದ ಅರ್ಹತಾ ವಿದ್ಯಾರ್ಹತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:20 ರ ಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಕರೆಯಾಗುವುದು. ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| **ಕನ್ನಡ ಭಾಷೆ** | **50 ಅಂಕಗಳು** |
| **ಸಾಮಾನ್ಯ ಆಂಗ್ಲ ಭಾಷೆ** | **25 ಅಂಕಗಳು** |
| **ಸಾಮಾನ್ಯ ಜ್ಞಾನ** | **25 ಅಂಕಗಳು** |
| **ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು** | **50 ಅಂಕಗಳು** |

| | |
|---|---|
| **ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು** | **25 ಅಂಕಗಳು** |
| **ಸಹಕಾರ ಮತ್ತು ಬ್ಯಾಂಕಿಂಗ್ ವ್ಯವಸ್ಥೆ** | **25 ಅಂಕಗಳು** |
| **ಒಟ್ಟು** | **200 ಅಂಕಗಳು** |

ಇವುಗಳ ಬಗ್ಗೆ ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಅವರಿಂದಲೇ ಮಾಡಿಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.** ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

4.ಶೀಘ್ರಲಿಪಿಗಾರರ ಹುದ್ದೆ: ಖಾಲಿ ಇರುವ ಶೀಘ್ರಲಿಪಿಗಾರರ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

ಶೀಘ್ರಲಿಪಿಗಾರರ ಹುದ್ದೆಗೆ ನಿಗಧಿಪಡಿಸಿದ ಅರ್ಹತಾ ವಿದ್ಯಾರ್ಹತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:20 ರ ಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಕರೆಯಾಗುವುದು. ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| **ಕನ್ನಡ ಭಾಷೆ** | **50 ಅಂಕಗಳು** |
| **ಸಾಮಾನ್ಯ ಆಂಗ್ಲ ಭಾಷೆ** | **25 ಅಂಕಗಳು** |
| **ಸಾಮಾನ್ಯ ಜ್ಞಾನ** | **25 ಅಂಕಗಳು** |
| **ಬೆರಳಚ್ಚು / ಶೀಘ್ರಲಿಪಿ / ಕಂಪ್ಯೂಟರ್ ಜ್ಞಾನ** | **100 ಅಂಕಗಳು** |
| **ಒಟ್ಟು** | **200 ಅಂಕಗಳು** |

ಇವುಗಳ ಬಗ್ಗೆ ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಅವರಿಂದಲೇ ಮಾಡಿಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.** ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು (**ಪ್ರವೀಣ ದರ್ಜೆಯಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಗೆ** ಕೃಪಾಂಕ 1 ನ್ನು) ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

**5.ಕಿರಿಯ ಸಹಾಯಕರ ಹುದ್ದೆ:** ಖಾಲಿ ಇರುವ ಕಿರಿಯ ಸಹಾಯಕರ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

ಕಿರಿಯ ಸಹಾಯಕರ ಹುದ್ದೆಗೆ ನಿಗಧಿಪಡಿಸಿದ ಅರ್ಹತಾ ವಿದ್ಯಾರ್ಹತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:20 ರ ಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಕರೆಯಾಗುವುದು. ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ 200 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | |
|---|---|
| **ಕನ್ನಡ ಭಾಷೆ** | **50 ಅಂಕಗಳು** |
| **ಸಾಮಾನ್ಯ ಆಂಗ್ಲ ಭಾಷೆ** | **25 ಅಂಕಗಳು** |
| **ಸಾಮಾನ್ಯ ಜ್ಞಾನ** | **25 ಅಂಕಗಳು** |
| **ಸಹಕಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳು** | **50 ಅಂಕಗಳು** |
| **ಭಾರತ ಸಂವಿಧಾನಕ್ಕೆ ಸಂಬಂಧಿಸಿದ ವಿಷಯಗಳು** | **25 ಅಂಕಗಳು** |
| **ಸಹಕಾರ ಮತ್ತು ಬ್ಯಾಂಕಿಂಗ್ ವ್ಯವಸ್ಥೆ** | **25 ಅಂಕಗಳು** |
| **ಒಟ್ಟು** | **200 ಅಂಕಗಳು** |

ಇವುಗಳ ಬಗ್ಗೆ ಲಿಖಿತ ಪರೀಕ್ಷೆಯನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ಆಯ್ಕೆ ಮಾಡಲಿರುವ ಬಾಹ್ಯಮೂಲ ಸಂಸ್ಥೆಯಿಂದ ನಡೆಸಲಾಗುವುದು ಮತ್ತು ಉತ್ತರ ಪತ್ರಿಕೆಯ ಮೌಲ್ಯ ಮಾಪನವನ್ನು ಅವರಿಂದಲೇ ಮಾಡಿಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ನಿಗಧಿಪಡಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. **ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.** ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

**6. ವಾಹನ ಚಾಲಕರ ಹುದ್ದೆ:** ಬ್ಯಾಂಕಿಗೆ ಬರುವ ಒಟ್ಟು ಅರ್ಜಿಗಳನ್ನು ಪರಿಶೀಲಿಸಿ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ, **1 : 5** ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವಾಹನ ಚಾಲನಾ ಪರೀಕ್ಷೆಗೆ ಕರೆಯಲಾಗುವುದು. ಸಂದರ್ಶನಕ್ಕೆ ನಿಗದಿಪಡಿಸಲಾದ ಅಂಕಗಳು **15** ಮತ್ತು ವಾಹನ ಚಾಲನೆಯ ಪ್ರವೀಣತೆಯ ಪರೀಕ್ಷೆಗೆ ನಿಗದಿಪಡಿಸಲಾದ ಅಂಕಗಳು 30. ವಾಹನ ಚಾಲನಾ ಪ್ರವೀಣತಾ ಪರೀಕ್ಷೆಯನ್ನು ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ನಡೆಸಲಾಗುವುದು. ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಆಯ್ಕೆ ಸಮಿತಿಯಿಂದ ನಡೆಸಲಾಗುವುದು. ವಾಹನ ಚಾಲನೆಯ ಪ್ರವೀಣತೆಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85 ಕ್ಕೆ ಇಳಿಸಿ ಜೊತೆಗೆ ಮೌಖಿಕ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿ ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

7. **ಜವಾನರು ಹುದ್ದೆ:** ಬ್ಯಾಂಕಿಗೆ ಬರುವ ಒಟ್ಟು ಅರ್ಜಿಗಳನ್ನು ಪರಿಶೀಲಿಸಿ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ, **1 : 5** ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ನಿಗದಿಪಡಿಸಲಾದ ಅಂಕಗಳು **15.** ಮೌಖಿಕ ಸಂದರ್ಶನವನ್ನು ಬ್ಯಾಂಕಿನ ಆಡಳಿತ ಮಂಡಲಿಯಿಂದ ರಚಿಸಲ್ಪಟ್ಟ ನೇಮಕಾತಿ ಸಮಿತಿಯಿಂದ ನಡೆಸಲಾಗುವುದು. ಎಸ್.ಎಸ್.ಎಲ್.ಸಿ.ಯಲ್ಲಿ ಪಡೆದ ಅಂಕಗಳ ಶೇಕಡಾವಾರು ಪ್ರಮಾಣವನ್ನು ಶೇಕಡ **85** ಕ್ಕೆ ಇಳಿಸಿ, ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ, ಅರ್ಹತಾ ಪಟ್ಟಿಯನ್ನು (Merit List) ತಯಾರಿಸಿ ಮೀಸಲಾತಿ ನಿಯಮಗಳನ್ನು ಅನುಸರಿಸಿ, ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

## 6. ಅರ್ಜಿ ಸಲ್ಲಿಸುವ ವಿಧಾನ :

| | |
|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಪ್ರಾರಂಭಿಕ ದಿನಾಂಕ | 10–01–2018 |
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 31–01–2018 |
| ಶುಲ್ಕ ಪಾವತಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 31–01–2018 |

**ವಿಶೇಷ ಸೂಚನೆ:**ONLINEಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help Line) **8951107408** ಅನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

ಹಂತ:1:ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ **http://www.recruit-app.com/kcdccb-2018** ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'K & C DCC BANK RECRUITMENT 2018'**ಎಂದು ಮೂಡುತ್ತದೆ. ಅಧಿಸೂಚನೆ / ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್ ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **New Registration**ಗುಂಡಿಯನ್ನು ಒತ್ತಿ ಮುಂದುವರಿಯಿರಿ.

ಹಂತ: 2: ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ Apply ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ Preview ಗುಂಡಿಯನ್ನು ಒತ್ತಿ ಮುಂದುವರಿಯಿರಿ.

ಹಂತ: 3: ಅರ್ಜಿಯು ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ Edit ಪುಟದಲ್ಲಿ ಗುಂಡಿಯನ್ನು ಒತ್ತಿ ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಆಪ್ ಲೋಡ್ ಮಾಡುವ ಬಗ್ಗೆ Next ಗುಂಡಿಯನ್ನು ಒತ್ತಿ.

Note: ಈ ಹಂತದಲ್ಲಿ ಅಭ್ಯರ್ಥಿಯು ಪರದೆಯ ಮೇಲೆ ಮೂಡಲಾದ Registration Id ಯನ್ನು ತಪ್ಪದೇ ಬರೆದಿಟ್ಟುಕೊಳ್ಳಬೇಕು. ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ Registration Id ಮತ್ತು Password ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು Edit Application ಗುಂಡಿಯನ್ನು ಒತ್ತಿ, ಅವರ Registration Id ಮತ್ತು NextPassword ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್ ಲೋಡ್ ಮಾಡಬಹುದು ಅಥವಾ ಅಪ್ ಲೋಡ್ ಮಾಡಿದ ಮಾಹಿತಿಯನ್ನು

ಬದಲಾಯಿಸಬಹುದು.

ಹಂತ: 4: ನೀವು ಸ್ವಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ Browse ಗುಂಡಿಯನ್ನು ಒತ್ತಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು Submit ಗುಂಡಿಯನ್ನು ಒತ್ತಿ ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್ ಲೋಡ್ ಮಾಡಿದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಮುಂದಿನ ಪುಟದ ಬಗ್ಗೆ next ಗುಂಡಿಯನ್ನು ಒತ್ತಿದರೆ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು, ನಕ್ಷೆ/ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಸರಿ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳುವುದು.ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.

| ಕಡತ ಗಾತ್ರ<100ಕೆ.ಬಿ | ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ |
|---|---|
| ಡಿಪಿಐ ಸೆಟ್ಟಿಂಗ್ =100 ಡಿಪಿಐ |  |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |



Note: ಅಭ್ಯರ್ಥಿಯು photo upload ಗುಂಡಿಯನ್ನು ಒತ್ತಿ, ಅವರ Registration Id ಮತ್ತು password ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್ ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಹಂತ: 5: ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾನುಭವ, ಮೀಸಲಾತಿ(ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಕನ್ನಡ ಮಾಧ್ಯಮ, ಮಾಜಿ ಸೈನಿಕ, ಯೋಜನಾ ನಿರಾಶ್ರಿತ, ಗ್ರಾಮೀಣ ಪ್ರಮಾಣ) ವಯೋಮಿತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳಿಗೆ ಸ್ವಯಂ ದೃಢೀಕರಿಸಿ (Self Attestation) ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕಾನ್ ಮಾಡಿ upload ಮಾಡತಕ್ಕದ್ದು. ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹಂತ: 6: ಅರ್ಜಿಯ ಮುದ್ರಣವನ್ನು ಪಡೆಯಲು Print Application ಗುಂಡಿಯನ್ನು ಒತ್ತಿ ಅನಂತರವೇ Application Preview ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ download ಮಾಡಿಕೊಳ್ಳತಕ್ಕದ್ದು. **K & C DCC BANK ಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.**

## 7. ಸೂಚನೆಗಳು

- **ಅಭ್ಯರ್ಥಿಗಳು ನಿಗಧಿಪಡಿಸಿದ ಕೊನೆಯ ದಿನಾಂಕದವರೆವಿಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.**

- **ಅರ್ಜಿ ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 31-01-2018 ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ/ಪೋಸ್ಟಲ್ ಆರ್ಡರ್/ ಮನಿಯಾರ್ಡರ್ ಮೂಲಕ ಪಾವತಿಸಿದ ಶುಲ್ಕವನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.**

- **ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂಧರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೇ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿ ಕೊಡಲಾಗುವುದಿಲ್ಲ.**

- ಬ್ಯಾಂಕಿನಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಬ್ಯಾಂಕಿನ ಜಾಲ ತಾಣದಿಂದ (WEBSITE) ಪಡೆದು ತಾಕ್ಷಣಿಕ ಸೇವೆಯ (ONLINE) ಮೂಲಕವೇ, ಸಲ್ಲಿಸತಕ್ಕದ್ದು.
- ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.
- ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.
- ಅರ್ಜಿ ನಮೂನೆಯನ್ನು ಬ್ಯಾಂಕಿನ ಜಾಲ ತಾಣದ ಮೂಲಕ ಡೌನ್ ಲೋಡ್ ಮಾಡಿಕೊಂಡು ಮುದ್ರಿಸಿ ಅಂಚೆ ಅಥವಾ ಇನ್ನಿತರೆ ಮಾಧ್ಯಮಗಳ ಮೂಲಕ ಸಲ್ಲಿಸಿದಲ್ಲಿ ಅವುಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಗಳಲ್ಲಿ ಅಪೂರ್ಣ ಮಾಹಿತಿಗಳನ್ನು ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಬ್ಯಾಂಕಿನ ಸೂಚನೆಗಳನ್ನು ಅರಿಯದೆ ತಪ್ಪೆಸಗಿದಲ್ಲಿ ಬ್ಯಾಂಕು ಜವಾಬ್ದಾರರಾಗಿರುವುದಿಲ್ಲ.
- ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. ಲಿಖಿತ ಪರೀಕ್ಷೆ ನಡೆಯುವ ಸ್ಥಳ, ದಿನಾಂಕ ಮತ್ತು ವೇಳೆ ಇವುಗಳ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.**

## 8. ಅರ್ಹತಾ ಷರತ್ತುಗಳು:

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು

ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಇದ್ದಲ್ಲಿ, ನೇಮಕಾತಿಗೆ ಅರ್ಹರಾಗುವುದಿಲ್ಲ.

- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.
- ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**9. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:–**

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದುಃ–

ಅ) **ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಡಿ'**
ಆ) **ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳುಃ– ನಮೂನೆ 'ಇ'**
ಇ) **ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳುಃ ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ –2ಎ, ಪ್ರವರ್ಗ – 2ಬಿ, ಪ್ರವರ್ಗ–3 ಎ ಮತ್ತು ಪ್ರವರ್ಗ – 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು ಹಾಗೂ ಅದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**10. ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿ:–**

ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು, ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಮೂಲ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

**11. ಗ್ರಾಮೀಣ ಅಭ್ಯರ್ಥಿ:–**

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕಃ 13–02–2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ

10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ –2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ –2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ಮಿಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ.)

**12.ಅಂಗವಿಕಲ ಅಭ್ಯರ್ಥಿ:–**

ಸರ್ಕಾರದ ಅಧಿಸೂಚನೆಗಳನ್ವಯ ಅಂಗವಿಕಲರಿಗೆ ಮೀಸಲಾತಿಯನ್ನು ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ/115/ಸೇನೆನಿ 2005, ದಿನಾಂಕಃ 19–11–2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದುಕೊಂಡಿರತಕ್ಕದ್ದು. ಬೇರೆ ನಮೂನೆಯಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರಮಾಣ ಪತ್ರಗಳನ್ನು ಸಂದರ್ಶನ ವೇಳೆ ಹಾಜರುಪಡಿಸತಕ್ಕದ್ದು.

**13. ವಿಶೇಷ ಸೂಚನೆಗಳು :** ಅಪೂರ್ಣವಾಗಿ ಭರ್ತಿ ಮಾಡಿದ ಅರ್ಜಿ, ಅಪೂರ್ಣವಾದ ಭಾವ ಚಿತ್ರ ಹಾಗೂ ಅಪೂರ್ಣವಾದ ಸಹಿಯೊಂದಿಗೆ upload ಮಾಡಿದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ **ತಾಕ್ಷಣಿಕ ಸೇವೆಯ (ONLINE) ಮೂಲಕ ಭರ್ತಿ ಮಾಡಿ** upload ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ / ಇತರೆ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಸಂದರ್ಶನಕ್ಕೆ / ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸಬೇಕು. ನಿಗಧಿತ ನಮೂನೆಯಲ್ಲದೆ ಅಥವಾ ಅರ್ಜಿ ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು.

14. ಸಲ್ಲಿಸಬೇಕಾದ ಲಗತ್ತುಗಳು

1. ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು
2. ನಿರಾಕ್ಷೇಪಣೆ ಪತ್ರ ( ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ )

3. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ ( ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ )
4. ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3 ಬಿ ಗಳ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಕ್ಯುಮುಲೇಟೀವ್ ರೆಕಾರ್ಡ್‌ನ ಜೆರಾಕ್ಸ್ ಪ್ರತಿಯನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಮೂಲ ದಾಖಲೆಗಳೊಂದಿಗೆ ಸಂದರ್ಶನ / ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
8. ನಿಗಧಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಮೂಲ ದಾಖಲೆಗಳೊಂದಿಗೆ ಸಂದರ್ಶನ / ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
9. ಮೀಸಲಾತಿ ಪ್ರಮಾಣ ಪತ್ರ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ.
10. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
11. ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣವನ್ನು ನೀಡದೆ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ,ತಡೆಹಿಡಿಯುವ, ಬದಲಾಯಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.
12. ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯ ಪರಿಕ್ಷಾರ್ಥ ಸೇವೆಯಲ್ಲಿರಬೇಕಾಗುತ್ತದೆ. ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕಿನಿಂದ ಸೂಚಿಸಲ್ಪಟ್ಟಂತೆ ಠೇವಣಿ ಹಾಗೂ ವೈಯಕ್ತಿಕ ಭದ್ರತೆ ನೀಡಬೇಕಾಗುತ್ತದೆ.
13. ಭರ್ತಿ ಮಾಡಬೇಕಾಗಿರುವ ಮೇಲಿನ ಎಲ್ಲಾ ಹುದ್ದೆಗಳನ್ನು ಕರ್ನಾಟಕ ಸರ್ಕಾರದ ಮೀಸಲಾತಿ ಆದೇಶದ ರೀತ್ಯಾ ಮೀಸಲಾತಿ ನೀಡಿ ನೇಮಕಾತಿ ಮಾಡಲಾಗುವುದು.
14. ಕೇಂದ್ರ ಸರ್ಕಾರ / ರಾಜ್ಯ ಸರ್ಕಾರ / ಯಾವುದೇ ಅರೆ ಸರ್ಕಾರಿ / ಖಾಸಗಿ ಅಥವಾ ಯಾವುದೇ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಕ್ಷಮ ಪ್ರಾಧಿಕಾರದಿಂದ ನಿಗಧಿತ ನಮೂನೆಯಲ್ಲಿ ದೃಢೀಕರಿಸಿ ನೀಡುವುದು.
15. ಮೇಲ್ಕಂಡ ಹುದ್ದೆಗಳನ್ನು ಭರ್ತಿ ಮಾಡುವುದು ಬ್ಯಾಂಕಿನಲ್ಲಿ ಅಂತಿಮವಾಗಿ ಲಭ್ಯವಾಗಬಹುದಾದ ಹುದ್ದೆಗಳನ್ನು ಅವಲಂಬಿಸಿರುತ್ತದೆ. ಆದುದರಿಂದ ಮೇಲ್ಕಂಡ ಹುದ್ದೆಗಳ ಸಂಖ್ಯೆಯು ಬದಲಾವಣೆಗೆ ಒಳಪಟ್ಟಿರುತ್ತದೆ.
16. ಬ್ಯಾಂಕಿನ (ನೇಮಕಾತಿ ಪ್ರಾಧಿಕಾರದ) ಸೂಚನೆಗಳನ್ನು ಪಾಲಿಸದೆ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**15.ಇತರೆ :**

- **ತಾಕ್ಷಣಿಕ ಸೇವೆಯ (ONLINE) ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.**
- **ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು**

**ಪಡೆದಿಟ್ಟುಕೊಂಡರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನದ / ಮೂಲ ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು ತಪ್ಪಿದಲ್ಲಿ ಅಭ್ಯರ್ಥಿಯ ಆಯ್ಕೆಯನ್ನು ಅನರ್ಹಗೊಳಿಸಲಾಗುವುದು.**

ಆಯಾ ಹುದ್ದೆಗಳಿಗೆ ನಿಗಧಿಪಡಿಸಿದ ಲಿಖಿತ ಪರೀಕ್ಷೆಯ ದಿನಾಂಕ, ಪ್ರವೇಶ ಪತ್ರ ನೀಡಿಕೆ (admission ticket) ಮತ್ತು ಸಂದರ್ಶನದ ದಿನಾಂಕಗಳನ್ನು ಬ್ಯಾಂಕಿನ ಜಾಲತಾಣದಲ್ಲಿ (website) http://www.recruit-app.com/kcdccb-2018ಪ್ರಕಟಿಸಲಾಗುವುದು. ಜಾಲತಾಣದಲ್ಲಿ ಪ್ರಕಟಿಸುವ ಬಗ್ಗೆ ದಿನಪತ್ರಿಕೆಗಳಲ್ಲಿ ಪತ್ರಿಕಾ ಪ್ರಕಟಣೆ ನೀಡಲಾಗುವುದು. ಅಭ್ಯರ್ಥಿಗಳು ಜಾಲ ತಾಣದಲ್ಲಿ ತಿಳಿಸಿರುವ ಸೂಚನೆಗಳನ್ನು ಅನುಸರಿಸಿ ಪ್ರವೇಶ ಪತ್ರ ಪಡೆದು ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

**16.ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು / ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ / ಆಯ್ಕೆಯಿಂದ ಯಾವುದೇ ತರಹದ ಅನುಮಾನ ಬಂದಿದ್ದಲ್ಲಿ ಯಾವುದೇ ಹಂತದಲ್ಲಿ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**17.ನಿರ್ಬಂಧ :**

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ,
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ,
3. ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
4. ಭಾರತ ದೇಶದ ಸಾರ್ವಭೌಮ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ,
6. ವ್ಯಕ್ತಿಯು ನ್ಯಾಯಬಾಹಿರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು

ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

ಸಹಿ/–
(ಡಾ: ಎಂ.ವೆಂಕಟೇಶಪ್ಪ)
**ಸದಸ್ಯ ಕಾರ್ಯದರ್ಶಿ, ಸಿಬ್ಬಂದಿ ನೇಮಕಾತಿ ಆಯ್ಕೆ ಸಮಿತಿ,**
**ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ**
**ಕೋಲಾರ ಮತ್ತು ಚಿಕ್ಕಬಳ್ಳಾಪುರ ಡಿ.ಸಿ.ಸಿ. ಬ್ಯಾಂಕ್ ನಿ., ಕೋಲಾರ.**

ಸಹಿ/–
(ಬ್ಯಾಲಹಳ್ಳಿ ಎಂ.ಗೋವಿಂದಗೌಡ)
**ಅಧ್ಯಕ್ಷರು, ಸಿಬ್ಬಂದಿ ನೇಮಕಾತಿ ಆಯ್ಕೆ ಸಮಿತಿ,**
**ಹಾಗೂ ಅಧ್ಯಕ್ಷರು,**
**ಕೋಲಾರ ಮತ್ತು ಚಿಕ್ಕಬಳ್ಳಾಪುರಡಿ.ಸಿ.ಸಿ. ಬ್ಯಾಂಕ್ ನಿ., ಕೋಲಾರ.**

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

*ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ*

**ಪ್ರಮಾಣ ಪತ್ರ**

.................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................... ಜಿಲ್ಲೆಯ / ವಿಭಾಗದ ............................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ............................... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

1. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ...............................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ................................................................ ಜಿಲ್ಲಾ / ವಿಭಾಗದ ........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.....................................................

ತಹಶೀಲ್ದಾರ್.........................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *
* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.**

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)
ನಮೂನೆ – ಇ
(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ / ನಗರ
ನಿವಾಸಿಯಾದ ಶ್ರೀ / ಶ್ರೀಮತಿ ಇವರ ಮಗ
/ ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ಇವರು
ಹಿಂದುಳಿದ ವರ್ಗಗಳ (ಪ್ರವರ್ಗ) ಜಾತಿಯ
ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್
ದಿನಾಂಕ : ತಾಲ್ಲೂಕು
ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)
ನಮೂನೆ – ಎಫ್
(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು
ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;
*ಅಥವಾ*

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;
ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;
ಅಥವಾ

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಮೂರುವರೆ ಲಕ್ಷ ಮೀರುವುದಿಲ್ಲವೆಂದು;
ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ಇವರು ಜಾತಿಗೆ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
___________ತಾಲ್ಲೂಕು
ಕಛೇರಿಯ ಮೊಹರು

## ನಮೂನೆ – 1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಶೀಲ್ದಾರರು

ತಾಲ್ಲೂಕು

ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು / ಪತಿ / ಪತ್ನಿ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ

ವಿಧೇಯ

ದಿನಾಂಕ: (ಅಭ್ಯರ್ಥಿಯ

ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ:

ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ

ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು
ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ

ಸೂಚನೆ-1 :ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ
ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.
ಸೂಚನೆ-2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94,

## ನಮೂನೆ – 2

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು

ಸಹಿ

ಕ್ಷೇತ್ರ ಶಿಕ್ಷಣ ಅಧಿಕಾರಿ

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 44 ಸೆನೆನಿ 2001 ದಿನಾಂಕ: 27.07.2001

## ನಮೂನೆ – 3

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ಯೋಜನೆಗಾಗಿ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ :

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

### ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

### ರಾಜ್ಯ ಸರ್ಕಾರಿ/ ಕೇಂದ್ರ ಸರ್ಕಾರಿ/ಅರೆಸರ್ಕಾರಿ/ಖಾಸಗಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

ಶ್ರೀ / ಶ್ರೀಮತಿ....................................................................................... ರವರು ರಾಜ್ಯ / ಕೇಂದ್ರ ಸರ್ಕಾರ/ಅರೆಸರ್ಕಾರಿ/ಖಾಸಗಿ ಸಂಸ್ಥೆಯಲ್ಲಿ ........................................................................................ (ಪದನಾಮ) ........................................................................................ ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ ................................ ರಿಂದ ............................................. ರವರೆಗೆ ಹೊಂದಿರುವರು..

ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005**

*CERTIFICATE FOR THE PERSONS WITH DISABILITIES*

This is to certify that Sri / Smt / Kum ……………………………………………………… son / wife / daughter of Shri ……………………………………………….. …………………….Age ………………………… old, male / female, Registration No …………………………… is a case of ………………………... He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ………………… months/years. *

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Sd/-<br>(Doctor)<br>(Seal) | Sd/-<br>(Doctor)<br>(Seal) | Sd/-<br>(Doctor)<br>(Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person